ಉಪವಿಭಾಗವನ್ನು ಶಿವಮೊಗ್ಗಕ್ಕೆ ಸ್ಥಳಾಂತರಿಸಿರುವುದರಿಂದ ಈ ಪರಿಸ್ಥಿತಿ ಉದ್ಭವಿಸಿರುವುದಿಲ್ಲ.

ಊ) ಸಣ್ಣ ನೀರಾವರಿ ಇಲಾಖೆಯಲ್ಲಿ ಶಿವಮೊಗ್ಗ, ಮಂಗಳೂರು ಮತ್ತು ಚಿತ್ರದುರ್ಗ ವಿಭಾಗಗಳ ವ್ಯಾಪ್ತಿಯಲ್ಲಿ ಬರುವ ಕಾಮಗಾರಿಗಳ ಗುಣಮಟ್ಟವನ್ನು ಪರೀಕ್ಷಿಸಲು ಒಂದು ಗುಣನಿಯಂತ್ರಣ ಉಪ ವಿಭಾಗದ ಅವಶ್ಯಕತೆ ಇರುವುದರಿಂದ ಈ ಉಪವಿಭಾಗವನ್ನು ಶಿವಮೊಗ್ಗ ಇಲ್ಲಿಗೆ ಸ್ಥಳಾಂತರಿಸಲಾಗಿದೆ.

ಸಣ್ಣ ನೀರಾವರಿ ಇಲಾಖೆಯ ಅರಸೀಕೆರೆ ಭಾಗದಲ್ಲಿ ಸಣ್ಣ ನೀರಾವರಿ ಕಾಮಗಾರಿಗಳೂ/ ಕೆಲಸಗಳು ಕಡಿಮೆ ಇರುವುದರಿಂದ ಹಾಸನ ಉಪವಿಭಾಗ ದಿಂದಲೇ ನಿರ್ವಹಿಸಬಹುದಾಗಿದೆ. ಆದುದರಿಂದ, ಅರಸೀಕೆರೆಯಲ್ಲಿ ಸಣ್ಣ ನೀರಾವರಿ ಉಪವಿಭಾಗವನ್ನುಮುಂದುವರಿಸುವ ಸಾಧ್ಯತೆ ಇರುವುದಿಲ್ಲ.

3533 (3893)– ಶ್ರೀ ಬಸವರಾಜು ಹೆಚ್.ಡಿ. (ವಿರಾಜ್‌ಪೇಟೆ)– ಮಾನ್ಯ ಸಣ್ಣ ಉಳಿತಾಯ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ಕಡಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಒಂದಂಕಿ, ಎರಡಂಕಿ ಲಾಟರಿ ಹಾಗೂ ಇತರ ಲಾಟರಿ ಯೋಜನೆಗಳ ಟಿಕೇಟ್ ಮಾರಾಟದಿಂದ ಲಕ್ಷಾಂತರ ಬಡ ಕೂಲಿ ಕಾರ್ಮಿಕವರ್ಗದ ಜನರು, ರೈತರು ಬೀದಿಪಾಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಈ ಲಾಟರಿಗಳ ಮಾರಾಟದ ನಿಷೇಧಕ್ಕೆ ಸರ್ಕಾರ ಯಾವ ರೀತಿಯ ಬಿಗಿ ಕ್ರಮವನ್ನು ಕೈಗೊಳ್ಳಲಿದೆ ಮತ್ತು ಇದು ಯಾವಾಗಿನಿಂದ ಜಾರಿಗೆ ಬರಲಿದೆ ?

ಇ) ಈ ಬಗ್ಗೆ ಸರ್ಕಾರದ ನಿಲುವು ಏನು, ಸಂಪೂರ್ಣ ಲಾಟರಿ ನಿಷೇಧಕ್ಕೆ ಸರ್ಕಾರ ಚಿಂತಿಸಿದೆಯೇ, ಇಲ್ಲದಿದ್ದಲ್ಲಿ ಕಾರಣವೇನು ?

ಶ್ರೀ ಬಸವರಾಜ್ ಎಸ್.ಹೊರಟ್ಟಿ (ಸಣ್ಣ ಉಳಿತಾಯ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು)–

ಅ) ಒಂದಂಕಿ ಲಾಟರಿಯನ್ನು ಲಾಟರಿ (ರೆಗ್ಯುಲೇಷನ್) ಆಕ್ಟ್ 98ರ ಅಡಿಯಲ್ಲಿ ನಿಷೇಧಿಸಿದ್ದು, ಸಧ್ಯ ಈ ರೀತಿಯ ಲಾಟರಿ ರಾಜ್ಯದಲ್ಲಿ ಮಾರಾಟವಾಗುತ್ತಿಲ್ಲ ಮಟ್ಕಾ ಮಾದರಿಯ ದಂಧೆ ರಾಜ್ಯದ ಹಲವೆಡೆಗಳಲ್ಲಿ

ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದ್ದು ಅದರ ದುಷ್ಪರಿಣಾಮ ಸಮಾಜದ ಮೇಲೆ ಬೀಳಬಾರದೆಂಬ ದೃಷ್ಟಿಯಿಂದ ಅದರ ನಿಯಂತ್ರಣಕ್ಕೆ ಕ್ರಮ ಕೈಗೊಳ್ಳಲಾಗುತ್ತಿದೆ.

ಎರಡಂಕಿ ಲಾಟರಿಯು, ಲಾಟರಿ (ರೆಗ್ಯುಲೇಷನ್) ಆಕ್ಟ್ 98 ರಲ್ಲಿ ನಿಷೇಧಿಸಿರುವುದಿಲ್ಲ ಹಾಗೂ ಇದು ಬಡ ಕೂಲಿ ಕಾರ್ಮಿಕರ ಮೇಲೆ ದುಷ್ಪರಿಣಾಮ ಬೀರುತ್ತಿರುವ ಬಗ್ಗೆ ಸರ್ಕಾರಕ್ಕೆ ಯಾವುದೇ ದೂರು ಬಂದಿರುವುದಿಲ್ಲ.

ಆ) ಈ ದಂಧೆಯನ್ನು ತಡೆಗಟ್ಟುವ ಸಲುವಾಗಿ "Flying Squad" ರಚಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. ಇದರ ಜೊತೆಗೆ ಈ ದಂಧೆಯ ಬಗೆಗಿನ ದೂರುಗಳ ಬಗ್ಗೆ ಸಂಬಂಧಿಸಿದ ಪೋಲಿಸ್ ಅಧಿಕಾರಿಗಳು ಈ ದಂಧೆಯಲ್ಲಿ ತೊಡಗಿಸಿಕೊಂಡಿರುವವರ ಮೇಲೆ ಕ್ರಮ ಕೈಗೊಳ್ಳುತ್ತಿರುತ್ತಾರೆ.

ಇ) ಸಧ್ಯಕ್ಕೆ ಕರ್ನಾಟದ ಸರ್ಕಾರ ಪೇಪರ್ ಲಾಟರಿಯನ್ನು ನಡೆಸುತ್ತಿದೆ. ಈ ದಿಸೆಯಲ್ಲಿ ಯಾವುದೇ ಗಂಭೀರ ಪ್ರಸ್ತಾವನೆಯನ್ನು ಸರ್ಕಾರ ಪರಿಗಣಿಸಿಲ್ಲ.

3534 (3894) : ಶ್ರೀ ಬಸವರಾಜು ಹೆಚ್.ಡಿ. ವಿರಾಜ್‌ಪೇಟೆ – ಮಾನ್ಯ ಸಣ್ಣ ಉಳಿತಾಯ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೊಡಗು ಜಿಲ್ಲೆಯ ಅಭಿವೃದ್ಧಿದೃಷ್ಟಿಯಿಂದ ಮಾಹಿತಿ, ಜೈವಿಕವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ ಮೂಲಕ ಯವುದಾದರೂ ಯೋಜನೆ ಪ್ರಾರಂಭ ಮಾಡುವ ಬಗ್ಗೆ ಸರ್ಕಾರದ ಮುಂದೆ ಪ್ರಸ್ತಾವನೆಗಳು ಇದೆಯೇ;

ಆ) ಹಾಗಿದ್ದಲ್ಲಿ ಆ ಪ್ರಸ್ತಾವನೆಗಳು ಯಾವುವು ಮತ್ತು ಅದಕ್ಕಾಗಿ ಸರ್ಕಾರ ಎಷ್ಟು ಹಣ ಮಂಜೂರು ಮಾಡಿದೆ. ಈ ಕಾರ್ಯಕ್ರಮಗಳ ಅನುಷ್ಠಾನಕ್ಕೆ ಯಾವ ಸ್ಥಳಗಳನ್ನು ಆಯ್ಕೆ ಮಾಡಿಕೊಳ್ಳಲಾಗಿದೆ. ವಿವರ ನೀಡುವುದು ?

ಶ್ರೀ ಬಸವರಾಜ್ ಎಸ್.ಹೊರಟ್ಟಿ (ಸಣ್ಣ ಉಳಿತಾಯ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು)–

ಅ) ಹೌದು